ಶ್ರೀಮತಿ ದಮಯಂತಿ ಬೋರೇಗೌಡ : ಈ ಕೇಂದ್ರಗಳನ್ನು ಮಾರಿಗುಡಿ, ರಾಮಮಂದಿರ, ದೇವಸ್ಥಾನಗಳಲ್ಲಿ ನಡೆಸುವುದಕ್ಕೆ ಆಗುವುದಿಲ್ಲ. ಮತ್ತು ಸಾಮಾನಗಳನ್ನು ಇಟ್ಟುಕೊಳ್ಳಲು ಆಗುವುದಿಲ್ಲ. ಇದಕ್ಕೆ ಘನ ಸರ್ಕಾರದವರು ಆದ್ಯತೆಯನ್ನು ಕೊಟ್ಟು ಹೆಚ್ಚಿನ ರೀತಿಯಲ್ಲಿ ಅನುದಾನವನ್ನು ಮಂಜೂರು ಮಾಡುತ್ತೀರಾ?

ಶ್ರೀ ಧರ್ಮಸಿಂಗ್ : ಸರ್ಕಾರ ಇದರ ಬಗ್ಗೆ ಈಗಾಗಲೇ ಪರಿಶೀಲನೆ ಮಾಡಿದೆ. ಈಗಾಗಲೇ ನಾನು ಸಂಬಂಧಪಟ್ಟ ಕಾರ್ಯದರ್ಶಿಗಳು ಮತ್ತು ಅಧಿಕಾರಿಗಳ ಜೊತೆಯಲ್ಲಿಯೂ ಮಾತನಾಡಿ ಸ್ವಂತ ಕಟ್ಟಡವನ್ನು ಒದಗಿಸಲು ಹಣವನ್ನು ಕೊಡುತ್ತಿದ್ದೇವೆ. ಇನ್ನು ಹೆಚ್ಚಿಗೆ ಹಣವನ್ನು ಕೊಡುವುದಕ್ಕೆ ಪ್ರಯತ್ನ ಮಾಡುತ್ತೇವೆ.

ಬೆಳಗಾವಿಯ ಹುಕ್ಕೇರಿಯಲ್ಲಿ ರಂಗಮಂದಿರ ನಿರ್ಮಾಣ

975-ಶ್ರೀ ಉಮೇಶ್ ವಿ. ಕತ್ತಿ(ಹುಕ್ಕೇರಿ): ಮಾನ್ಯ ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬೆಳಗಾವಿ ಜಿಲ್ಲೆಯ ಹುಕ್ಕೇರಿ ಪಟ್ಟಣದಲ್ಲಿ ಪ್ರಾರಂಭಿಸಲಾದ ರಂಗಮಂದಿರ ಕಟ್ಟಡ ನಿರ್ಮಾಣವು ಅರ್ಧಕ್ಕೆ ನಿಂತಿದ್ದು, ಸರ್ಕಾರದವರ ಗಮನಕ್ಕೆ ಬಂದಿದೆಯೇ?

ಆ) ಬಂದಿದ್ದಲ್ಲಿ, ಅದನ್ನು ಪೂರ್ತಿಗೊಳಿಸಲು ಯಾವಾಗ ಹಣ ಬಿಡುಗಡೆ ಮಾಡಲಾಗುವುದು?

ಶ್ರೀ ಎಂ. ವೀರಪ್ಪಮೊಯಿಲಿ (ಮುಖ್ಯ ಮಂತ್ರಿಗಳು):

ಅ) ಹೌದು.

ಆ) ರೂ. 50,000-00 ಹಣ ಬಿಡುಗಡೆ ಮಾಡಲಾಗಿದೆ.

ಶ್ರೀ ಉಮೇಶ್ ವಿ. ಕತ್ತಿ : ಮಾನ್ಯ ಉಪಾಧ್ಯಕ್ಷಣೆಯವರೆ, ಬೆಳಗಾವಿ ಜಿಲ್ಲೆಯ ಹುಕ್ಕೇರಿ ಪಟ್ಟಣದಲ್ಲಿ ಪ್ರಾರಂಭಿಸಲಾದ ರಂಗಮಂದಿರಕಟ್ಟಡ ನಿರ್ಮಾಣವು ಅರ್ಧಕ್ಕೆ ನಿಂತಿದ್ದು ಸರ್ಕಾರದ ಗಮನಕ್ಕೆ ಬಂದಿದೆಯೇ ಎಂದು ಕೇಳಿದ್ದಕ್ಕೆ 'ಹೌದು' ಎಂದು ಹೇಳುತ್ತೀರಿ, ಅದನ್ನು ಪೂರ್ತಿಗೊಳಿಸಲು 50,000 ರೂಪಾಯಿ ಹಣ ಬಿಡುಗಡೆ ಮಾಡಲಾಗಿದೆ. ಎಂದು ಹೇಳುತ್ತೀರಿ, 50 ಸಾವಿರ ರೂಪಾಯಿಯಲ್ಲಿ ಈ ಕೆಲಸ ಮುಗಿಯುವುದಿಲ್ಲ. ಅದನ್ನು ಮುಗಿಸುವ ಕಾರ್ಯಕ್ರಮವನ್ನು ಸರ್ಕಾರ ಈ ವರ್ಷ ಹಾಕಿಕೊಳ್ಳುತ್ತದೆಯೇ ಎಂದು ಕೇಳುತ್ತೇನೆ.

ಶ್ರೀ ಧರ್ಮಸಿಂಗ್ (ಮುಖ್ಯ ಮಂತ್ರಿಗಳ ಪರವಾಗಿ) : ನಾವು ಈಗಾಗಲೇ ಅದಕ್ಕೆ 50 ಸಾವಿರ ರೂಪಾಯಿಗಳನ್ನು ಬಿಡುಗಡೆ ಮಾಡಿದ್ದೇವೆ. 50 ಸಾವಿರ ರೂಪಾಯಿಯಲ್ಲಿ ಆಗುವುದಿಲ್ಲವೆಂದು ಸರ್ಕಾರದ ಗಮನಕ್ಕೆ ಬಂದಿದೆ. ಏಕೆಂದರೆ ಮೊದಲು ಎಸ್ಟಿಮೇಟ್ ಮಾಡಿದ್ದಕ್ಕಿಂತ ಈಗ ಬೆಲೆಗಳು ಜಾಸ್ತಿಯಾಗಿವೆ. ಅದಕ್ಕೆ ಹೆಚ್ಚು ಹಣವನ್ನು ಕೊಡತಕ್ಕ ಪ್ರಯತ್ನ ಸರ್ಕಾರ ಮಾಡುತ್ತದೆ.

ಶ್ರೀ ಉಮೇಶ್ ವಿ. ಕತ್ತಿ: ಅದಕ್ಕೆ ಬೇಕಾದಷ್ಟು ಹಣವನ್ನು ಕೊಟ್ಟು ಈ ವರ್ಷದಲ್ಲಿ ಪೂರ್ಣಗೊಳಿಸಲು ಕ್ರಮ ಕೈಗೊಳ್ಳುತ್ತೀರಾ ಎಂದು ಕೇಳುತ್ತೇನೆ.

ಶ್ರೀ ಧರ್ಮಸಿಂಗ್ : 50 ಸಾವಿರ ರೂಪಾಯಿ ಸಾಕಾಗುತ್ತಿಲ್ಲ. ಹೆಚ್ಚು ಹಣವನ್ನು ಕೊಡುವುದಕ್ಕೆ ಸರ್ಕಾರ ಪರಿಶೀಲನೆ ಮಾಡುತ್ತದೆ.